



ಸುದ್ದಿ ಸಂಚಯ

# 'ಸ್ವಾಮಿ ವಿವೇಕಾನಂದ ಸ್ಮಾರಕ ಉದ್ಯಾನ'ದ ಉದ್ಘಾಟನೆ

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಬೆಂಗಳೂರು ಸಿಟಿ ರೈಲ್ವೇ ನಿಲ್ದಾಣದ ಆವರಣದಲ್ಲಿ ೨೦೨೦ರ ಅಕ್ಟೋಬರ್ ೨೬ ರಂದ ಸ್ವಾಮಿ ವಿವೇಕಾನಂದರ ೧೨.೩ ಅಡಿ ಎತ್ತರದ ಕಂಚಿನ ಪ್ರತಿಮೆ ಯನ್ನೊಳಗೊಂಡ '**ಸ್ವಾಮಿ ವಿವೇಕಾನಂದ ಸ್ಮಾರಕ ಉದ್ಯಾನವನ**'ದ ಉದ್ಘಾಟನೆ ನಡೆಯಿತು. ರಾಮಕೃಷ್ಣ ಮಠ



ಹಲಸೂರು ಹಾಗೂ ನೈಋತ್ಯ ರೈಲ್ವೇ — ಇವೆರಡರ ಜಂಟಿ ಆಶ್ರಯದಲ್ಲಿ ಈ ಉದ್ಯಾನದ ನಿರ್ಮಾಣಕಾರ್ಯ ಹಾಗೂ ಉದ್ಘಾಟನಾ ಸಮಾರಂಭ ನಡೆಯಿತು. ಸ್ವಾಮಿ ವಿವೇಕಾನಂದರು ೧೮೯೨ರಲ್ಲಿ ಬೆಂಗ ಳೂರಿಗೆ ನೀಡಿದ ಭೇಟಿ ಹಾಗೂ ೧೮೯೩ರಲ್ಲಿ ಚಿಕಾಗೋದಲ್ಲಿ ನಡೆದ ವಿಶ್ವಧರ್ಮ ಸಮ್ಮೇಳನದಲ್ಲಿ ಸ್ವಾಮೀಜಿ ನೀಡಿದ ಐತಿಹಾಸಿಕ ಭಾಷಣ — ಈ ಎರಡೂ ಮಹತ್ವದ ಘಟನೆಗಳ ಸ್ಮರಣಾರ್ಥವಾಗಿ ಈ ಸ್ಮಾರಕವನ್ನು ನಿರ್ಮಿಸಲಾಗಿದೆ.

ರಾಮಕೃಷ್ಣ ಮಹಾಸಂಘದ ಪರಮಾಧ್ಯಕ್ಷರಾದ ಶ್ರೀಮತ್ ಸ್ವಾಮಿ ಸ್ಮರಣಾನಂದಜೀ ಮಹಾರಾಜ್ ಅವರು ಆನ್‌ಲೈನ್ ಮೂಲಕ ಸ್ವಾಮೀಜಿಯವರ ಪ್ರತಿಮೆಯನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು. ಉದ್ಯಾನದ ಆವರಣದಲ್ಲಿ ಆಯೋಜಿಸಲಾಗಿದ್ದ ಸ್ವಾಮಿ ವಿವೇಕಾನಂದರ ಜೀವನವನ್ನು ಕುರಿತ ಮುಕ್ತ ಪ್ರದರ್ಶನವನ್ನು ಕೇಂದ್ರ ರಸಗೊಬ್ಬರ ಸಚಿವರಾದ ಶ್ರೀ ಡಿ.ವಿ. ಸದಾನಂದ ಗೌಡ ಅವರು ಉದ್ಘಾಟಿಸಿದರು. ಉದ್ಯಾನದ ಸಮೀಪ ದಲ್ಲೇ ಒಂದು ಸಭಾಕಾರ್ಯಕ್ರಮ ನಡೆಯಿತು. ಇದರಲ್ಲಿ ಪೂಜ್ಯ ಸ್ವಾಮಿ ಹರ್ಷಾನಂದಜಿ ಮಹಾರಾಜ್, ಸ್ವಾಮಿ ರಾಘವೇಶಾನಂದಜಿ ಮಹಾರಾಜ್ ಆಶೀರ್ವಚನ ನೀಡಿದರು. ಮುಖ್ಯ ಅತಿಥಿಗಳಾದ ಶ್ರೀ ಡಿ.ವಿ. ಸದಾನಂದ ಗೌಡ, ಕರ್ನಾಟಕ ಸರ್ಕಾರದ ಶಿಕ್ಷಣ ಸಚಿವರಾದ ಶೀ ಸುರೇಶ್ ಕುಮಾರ್, ನೈಋತ್ಯ ರೈಲ್ವೆಯ ಪ್ರಧಾನ ಮೇಲ್ವಿಚಾರಕರಾದ ಶ್ರೀ ಅಜಯಕುಮಾರ್ ಸಿಂಗ್, ಬೆಂಗಳೂರಿನ ಸಂಸದ ಶ್ರೀ ಪಿ.ಸಿ. ಮೋಹನ್ ಮುಂತಾದವರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೈಸೂರು ಶ್ರೀರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜಿ ಮಹಾರಾಜ್ ಅವರು ಅಧ್ಯಕ್ಷ ಭಾಷಣ ಮಾಡಿದರು.

ಕಾರ್ಯಕ್ರಮದ ಬಳಿಕ ಯತಿಪೂಜೆ, ಉದ್ಯಾನದ ನಿರ್ಮಾಣ ದಲ್ಲಿ ವಿಶೇಷರೂಪದಲ್ಲಿ ದುಡಿದ ಮಹನೀಯರಿಗೆ ಸನ್ಮಾನ ನಡೆಯಿತು.






Managing Editor : Swami Muktidananda
Editor : Swami Jnanayogananda
Printed and Published by Swami Muktidananda, on behalf of Sri Ramakrishna Ashrama, Yadavagiri, Mysore and Printed at Mayur Graphics, No.C-12, Industrial Estate, Rajaji Nagar, Bangalore -560 010 and published at Sri Ramakrishna Ashrama, Yadavagiri, Mysore -570 020